ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಹೈಕೋರ್ಟ್ ವಿಚಾರ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ

ದಿನಾಂಕ : DATE : 12/11/2019

# 5 ಹೊಸ ಹೈಕೋರ್ಟ್ ಜಡ್ಜ್‌ಗಳ ಪ್ರಮಾಣವಚನ



ಬೆಂಗಳೂರು: ಕರ್ನಾಟಕ ಹೈಕೋರ್ಟ್‌ಗೆ ಹೊಸದಾಗಿ ನೇಮಕಗೊಂಡ ಐವರು ಹೆಚ್ಚುವರಿ ನ್ಯಾಯಮೂರ್ತಿಗಳು ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು. ಸೋಮವಾರ ರಾಜಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ನೂತನ ನ್ಯಾಯಮೂರ್ತಿಗಳಾದ ಎನ್.ಎಸ್. ಸಂಜಯ ಗೌಡ, ಜ್ಯೋತಿ ಮೂಲಿಮನಿ, ಆರ್.ನಟರಾಜ್, ಹೇಮಂತ್ ಚಂದನಗೌಡರ್ ಹಾಗೂ ಪ್ರದೀಪ್ ಸಿಂಗ್‌ಯರೂರು ಅವರಿಗೆ ರಾಜ್ಯಪಾಲ ವಿ.ಆರ್. ವಾಲಾ ಪ್ರಮಾಣ ವಚನ ಬೋಧಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ ಅವರು ಹೊಸ ನ್ಯಾಯಮೂರ್ತಿಗಳಿಗೆ ಅಭಿನಂದನೆ ಸಲ್ಲಿಸಿದರು. ಧಾರವಾಡ, ಬೆಂಗಳೂರು ಮತ್ತು ಕಲಬುರಗಿ ಹೈಕೋರ್ಟ್ ಪೀಠಗಳಿಗೆ ಒಟ್ಟು 62 ನ್ಯಾಯಮೂರ್ತಿಗಳ ಹುದ್ದೆಗಳು ಮಂಜೂರಾಗಿವೆ. ಈವರೆಗೂ 34 ನ್ಯಾಯಮೂರ್ತಿಗಳು ಕಾರ್ಯ ನಿರ್ವಹಿಸುತ್ತಿದ್ದರು.